ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 21/3/2020

# ಸ್ಥಳೀಯ ಸಂಸ್ಥೆಗಳಲ್ಲೂ ನೋಟಾಕ್ಕೆ ಅಸ್ತು

## ವಿಧಾನಸಭೆಯಲ್ಲಿ ಸರ್ವಾನುಮತದಿಂದ ವಿಧೇಯಕ ಅಂಗೀಕಾರ

▪ ವಿಕ ಸುದ್ದಿಲೋಕ ಬೆಂಗಳೂರು 21/3/20

ಲೋಕಸಭೆ ಹಾಗೂ ವಿಧಾನಸಭಾ ಚುನಾವಣೆಗಳಲ್ಲಿರುವಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿಯೂ ನೋಟಾ ಮತ ಚಲಾಯಿಸುವುದಕ್ಕೆ ಅವಕಾಶ ಕಲ್ಪಿಸುವ ಕರ್ನಾಟಕ ಪೌರಸಂಸ್ಥೆಗಳು ಮತ್ತು ಕೆಲವು ಇತರ ಕಾನೂನು ತಿದ್ದುಪಡಿ ವಿಧೇಯಕ-2020ಕ್ಕೆ ವಿಧಾನಸಭೆ ಸರ್ವಾನುಮತದಿಂದ ಶುಕ್ರವಾರ ಅನುಮೋದನೆ ನೀಡಿದೆ.

ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳ ಪೈಕಿ ಯಾರೊಬ್ಬರಿಗೂ ಮತ ಚಲಾಯಿಸಲು ಇಷ್ಟವಿಲ್ಲದಿದ್ದರೆ ಮತಪತ್ರ ಹಾಗೂ ಮತಯಂತ್ರದಲ್ಲಿ ಮತದಾರರಿಗೆ ಆಯ್ಕೆ ನೀಡಲು ಈ ತಿದ್ದುಪಡಿ ವಿಧೇಯಕ ಅವಕಾಶ ಕಲ್ಪಿಸಿದೆ. ಮುಖ್ಯಮಂತ್ರಿ ಪರವಾಗಿ ಗೃಹ ಸಚಿವ ಬಸವರಾಜ ಬೊಮ್ಮಾಯಿ ವಿಧೇಯಕದ ಬಗ್ಗೆ ವಿವರಣೆ ನೀಡಿದ ಬಳಿಕ ಸದನ ಯಾವುದೇ ಚರ್ಚೆ ಇಲ್ಲದೆ ಒಪ್ಪಿಗೆ ನೀಡಿತು.

### ಕಲಬುರಗಿ ವಿವಿ ವಿಭಜನೆಗೆ ಸಮ್ಮತಿ

ಕಲಬುರಗಿ ವಿಶ್ವವಿದ್ಯಾಲಯವನ್ನು ವಿಭಜಿಸಿ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಪ್ರಾದೇಶಿಕ ಅಧಿಕಾರ ವ್ಯಾಪ್ತಿ ಹೊಂದಿರುವ ರಾಯಚೂರಿನಲ್ಲಿ ಕೇಂದ್ರ ಸ್ಥಾನವುಳ್ಳ ರಾಯಚೂರು ವಿವಿ ಸ್ಥಾಪನೆಗೆ ಅವಕಾಶ ಕಲ್ಪಿಸುವ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ-2020ಕ್ಕೆ ವಿಧಾನಸಭೆ ಒಪ್ಪಿಗೆ ಸೂಚಿಸಿತು. ವಿವಿಗೆ ಆರಂಭಿಕ ಖರ್ಚುಗಳಿಗೆ 2.20 ಕೋಟಿ ರೂ. ಅನುದಾನ ಒದಗಿಸಲಾಗಿದೆ.



ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಅವರು ವಿಧೇಯಕದ ಉದ್ದೇಶ ಕುರಿತು ವಿವರಣೆ ನೀಡಿದ ಬಳಿಕ ಸದನ ಸರ್ವಾನುಮತದ ಒಪ್ಪಿಗೆ ಸೂಚಿಸಿತು.

ಸಭಾತ್ಯಾಗದ ನಡುವೆ ವಿಧೇಯಕ ಅಂಗೀಕಾರ

ಪರಿಷತ್‌ನಲ್ಲಿ ಪ್ರತಿಪಕ್ಷಗಳ ಸಭಾತ್ಯಾಗದ ನಡುವೆ ಕರ್ನಾಟಕ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನ ನಿಯಂತ್ರಣ ವಿಧೇಯಕ-2020ಗೆ ಅನುಮೋದನೆ ದೊರಕಿತು.

ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್.ಅಶ್ವತ್ಥನಾರಾಯಣ ವಿಧೇಯಕ ಮಂಡಿಸಿ, ಈ ವಿಧೇಯಕಕ್ಕೆ ಅಂಗೀಕಾರ ನೀಡಬೇಕು ಎಂದು ಕೋರಿದರು.

ಆದರೆ, ಪ್ರತಿಪಕ್ಷಗಳ ಸದಸ್ಯರು ವಿಧೇಯಕದ ಅಗತ್ಯವಿಲ್ಲ, ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು. ಆದಕ್ಕೆ ಸಚಿವರು ಒಪ್ಪಲಿಲ್ಲ. ಕೊನೆಗೆ ಪ್ರತಿಪಕ್ಷಗಳ ಪ್ರತಿಪಕ್ಷಗಳ ಸಭಾತ್ಯಾಗದ ನಂತರ ಧ್ವನಿಮತದ ಮೂಲಕ ವಿಧೇಯಕಕ್ಕೆ ಅನುಮೋದನೆ ನೀಡಿತು.